## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗದಗ ಜಿಲ್ಲೆ ವ್ಯಾಪ್ತಿಯ ನರಗುಂದ ಮತ್ತು ರೋಣ ತಾಲ್ಲೂಕುಗಳ ಪ್ರವಾಹ ಪೀಡಿತ ಗ್ರಾಮಗಳಲ್ಲಿ ತುರ್ತಾಗಿ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಗದಗ ರವರ ಪ್ರಸ್ತಾವನೆ ಸಂಖ್ಯೆ: ಗಜಿಪಂ:ಅಭಿವೃದ್ಧಿ:ಸಿಆರ್:ಕುನಿಯೋ:2436:12-13 ದಿ:27.09.2012.

2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 108 ಗ್ರಾನೀಸ(4)09, ದಿನಾಂಕ:16.09.2010.

---

**ಪೀಠಿಕೆ:**

ಮೇಲೆ ಓದಲಾದ (2)ರ ಆದೇಶದಲ್ಲಿ ಗದಗ ಜಿಲ್ಲೆ ವ್ಯಾಪ್ತಿಯ ನರಗುಂದ ಮತ್ತು ರೋಣ ತಾಲ್ಲೂಕುಗಳ ಪ್ರವಾಹ ಪೀಡಿತ ಗ್ರಾಮಗಳಲ್ಲಿ ಸಮಸ್ಯೆಗೊಳಗಾದ ಗ್ರಾಮೀಣ ಜನವಸತಿಗಳಿಗೆ ಕುಡಿಯುವ ನೀರಿನ ಸುವ್ಯವಸ್ಥೆ ಕಲ್ಪಿಸುವ ಸಂಬಂಧ, ಇಲ್ಲಿಯವರೆವಿಗೆ ರೂ.611.60ಲಕ್ಷಗಳ ಅನುದಾನವನ್ನು ಗದಗ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲಾಗಿದೆ. ಸಮಸ್ಯಾತ್ಮಕ ಪ್ರವಾಹ ಪೀಡಿತ ಗ್ರಾಮಗಳಲ್ಲಿ ಶಾಶ್ವತ ಪರಿಹಾರ ಸಂಬಂಧ, ತುರ್ತು ಕುಡಿಯುವ ನೀರಿನ ಯೋಜನೆಗಳನ್ನು ಪೂರ್ಣಗೊಳಿಸಲು ಈಗಾಗಲೇ ಜಿಲ್ಲಾಧಿಕಾರಿಗಳ ಸಮನ್ವಯದಲ್ಲಿ ಜಿಲ್ಲಾ ಪಂಚಾಯತ್ ಅನುಮೋದಿಸಿರುವ ಕ್ರಿಯಾಯೋಜನೆ ಆಧರಿಸಿ, ಗದಗ ಜಿಲ್ಲೆಗೆ ರೂ.382.00ಲಕ್ಷ ಅನುದಾನವನ್ನು ಬಿಡುಗಡೆ ಮಾಡಲು ನಿರ್ಧರಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 108 ಗ್ರಾನೀಸ(4)2009 ಬೆಂಗಳೂರು, ದಿನಾಂಕ: 02.01.2013**

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ಗದಗ ಜಿಲ್ಲಾ ಪಂಚಾಯತಿಗೆ **ರೂ.382.00ಲಕ್ಷ(ಮೂರು ನೂರ ಎಂಬತ್ತೆರಡು ಲಕ್ಷ ರೂಪಾಯಿಗಳು ಮಾತ್ರ)** ಹೆಚ್ಚುವರಿ ಅನುದಾನವನ್ನು ಪ್ರವಾಹದಿಂದ ಹಾನಿಗೊಳಗಾದ ಗ್ರಾಮೀಣ ಪ್ರದೇಶಗಳ ಪೈಕಿ, ಸ್ಥಳಾಂತರಗೊಂಡ ಜನವಸತಿಗಳಿಗೆ, ಸಮರ್ಪಕ ಹಾಗೂ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆಗಳ ಅನುಷ್ಠಾನ ಸಂಬಂಧದ ಕಾಮಗಾರಿಗಳನ್ನು ಪೂರ್ಣಗೊಳಿಸುವ ಸಲುವಾಗಿ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಅನುಷ್ಠಾನಗೊಳಿಸುವ ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಮಾಹಿತಿಗಾಗಿ ಕಳುಹಿಸುವುದು. ಜಿಲ್ಲಾ ಪಂಚಾಯತ್ ಇತರೆ ಯಾವುದೇ ಕಾರಣಕ್ಕು ಈ ಆದೇಶದಲ್ಲಿ ನಿರ್ವಹಿಸಲಾದ ಕಾಮಗಾರಿಗಳು ಇತರೆ ಗ್ರಾಮೀಣ ನೀರು ಸರಬರಾಜು ಯೋಜನೆಗಳಡಿ ಮುನರಾವರ್ತನೆಯಾಗದಂತೆ ನೋಡಿಕೊಳ್ಳತಕ್ಕದ್ದು, ಹಾಗೂ ಅಗತ್ಯವಿರುವ ಯೋಜನೆಗಳನ್ನು ಮಾತ್ರ ಚಾಲ್ತಿಯಲ್ಲಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸತಕ್ಕದ್ದು.

3. ಈ ಅನುದಾನವನ್ನು ರಾಜ್ಯವಲಯದ **ಲೆಕ್ಕಶೀರ್ಷಿಕೆ:4215-01-102-9-01-059**ಯಡಿ ಗಣನೆಗೆ ತೆಗೆದುಕೊಂಡು, **RTGS** ಮುಖೇನ ಈಗಾಗಲೇ **Coverage & Quality**ಯಡಿ ಗೊತ್ತುಪಡಿಸಿರುವ **SWSM** ಬ್ಯಾಂಕ್ ಖಾತೆ ಮುಖೇನ ವಿನಿಯೋಗಿಸತಕ್ಕದ್ದು, ಸಿಂಡಿಕೇಟ್ ಬ್ಯಾಂಕ್ ಮೂಲ ಖಾತೆ ಸಂಖ್ಯೆ:**04462010091577**ರಿಂದ **Coverage & Quality** ಕಾರ್ಯಕ್ರಮದ ಖಾತೆ ಸಂಖ್ಯೆ:**04462010094572**ಕ್ಕೆ **ರೂ.382.00**ಲಕ್ಷಗಳನ್ನು ವರ್ಗಾಯಿಸಿ, ಸದರಿ ಅನುದಾನದಿಂದ **C&Q** ಘಟಕದಡಿ ಗದಗ ಜಿಲ್ಲಾ ಪಂಚಾಯತ್ ಕಳುಹಿಸುವ ಬಿಲ್‌ಗಳನ್ನು ಮಾನ್ಯ ಮಾಡತಕ್ಕದ್ದು. ಸದರಿ ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಗಳನ್ನು **CE/PRED** ಬೆಂಗಳೂರು ಹಾಗೂ ಗದಗ ಜಿಲ್ಲಾ ಪಂಚಾಯತ್ **IMIS**ನಡಿ ದಾಖಲಿಸತಕ್ಕದ್ದು.

4. ಸರ್ಕಾರದ ಸುತ್ತೋಲೆ ಸಂಖ್ಯೆ :ಗ್ರಾಅಪ 117 ಗ್ರಾನೀಸ(4)2011 ದಿ:15.10.2011ರನ್ವಯ ಸಂಬಂಧಪಟ್ಟ ಅಧೀಕ್ಷಕ ಅಭಿಯಂತರರು, PRED ವೃತ್ತ ಕಛೇರಿ ಇವರು ಪ್ರಶ್ನಿತ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪರಿವೀಕ್ಷಣೆ ಮಾಡಿ, ಸರ್ಕಾರಕ್ಕೆ ವಾಸ್ತವಿಕ ಚಿತ್ರಣ ನೀಡತಕ್ಕದ್ದು.

5. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ IFAರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ/13/ಆಂ.ಆ.ಸ/2012, ದಿನಾಂಕ:02.04.2012 ಮತ್ತು ಸಹಮತಿ ಸಂಖ್ಯೆ: ಗ್ರಾಅಪ/131/ಪಿಬಿಎಸ್/2012 ದಿನಾಂಕ:19/11/2012ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಇವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜನಿಯರ್, ಪಂಚಾಯತ್‌ರಾಜ್ ಇಂಜನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾಮಂಡಳಿ, ಸಂಕೀರ್ಣ ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.
12. ಅಧೀಕ್ಷಕ ಇಂಜನಿಯರ್ ಪಂಚಾಯತ್‌ರಾಜ್ ಇಂಜನಿಯರಿಂಗ್ ವೃತ್ತ ಕಛೇರಿ, ಧಾರವಾಡ.
13. ಜಿಲ್ಲಾಧಿಕಾರಿಗಳು, ಗದಗ.
14. ಜಿಲ್ಲಾ ಪಂಚಾಯತ್ ಅಧ್ಯಕ್ಷರು,ಗದಗ.
15. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು, ಗದಗ.
16. ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ನರಗುಂದ ಮತ್ತು ರೋಣ.
17. ಪಂಚಾಯತ್ ರಾಜ್ ಇಂಜನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜನಿಯರ್, ಗದಗ.
18. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜನಿಯರ್‌ರ PRED, ಕಛೇರಿ ಬೆಂಗಳೂರು-20.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ,ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
20. ನಿರ್ದೇಶಕರು KRWSSA ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ/ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು-9.
22. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
26. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
27. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.